ದಿನಾಂಕಃ 21.07.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀಸವಾಲುಃ 3 ನೇ ಪ್ರತಿವಾದಿಯರ ಪರ ಶ್ರೀ. ಎಸ್. ಎಸ್ .ಎನ್ ವಕೀಲರಿಂದಃ**

ಘಟಪ್ರಭಾದಲ್ಲಿರುವ ನಮ್ಮ ಮನೆಗಳಿಗೆ ವಿದ್ಯುತ್ ಸಂಪರ್ಕವನ್ನು 3 ಪ್ರತಿವಾದಿಯ ಹೆಸರಲ್ಲಿ ಪಡೆದಿರುತ್ತೇವೆ ಎಂದರೆ ಸರಿಯಲ್ಲ. ಸದರಿ ಮನೆಗೆ ಸೋಲಾರ್ ಪೆನಲ್ ಅಳವಡಿಸಿರುತ್ತಾರೆಂದರೆ ಸರಿಯಲ್ಲ. ಸದರಿ ಸೋಲಾರ್ ಪೆನಲ್ ಸಹ 3 ನೇ ಪ್ರತಿವಾದಿಯ ಹೆಸರಿಗೆ ಇರುತ್ತದೆಂದರೆ ನನಗೆ ನೆನಪಿಲ್ಲ. ನಾನು, ಪ್ರತಿವಾದಿ 1, 2 ಮತ್ತು 4 ಎಲ್ಲರೂ ಒಟ್ಟಿಗೆ ಒಂದೇ ಮನೆಯಲ್ಲಿ ವಾಸವಾಗಿದ್ದೇವೆ ಎಂದರೆ ಸರಿಯಲ್ಲ. ನನ್ನ ತಂದೆ ಖರೀದಿಸಿರುತ್ತಾರೆಂದು ಹೇಳುತ್ತಿರುವ ಆಸ್ತಿಗಳ ಖರೀದಿ ಪತ್ರಗಳನ್ನು ನಾನು ನೋಡಿಲ್ಲ. ನಾನು ನನ್ನ ತಂದೆಯ ಜೊತೆ ಸೇರಿಕೊಂಡು 3 ನೇ ಪ್ರತಿವಾದಿಗೆ ತೊಂದರೆ ಕೊಡುವ ಉದ್ದೇಶದಿಂದ ಖೊಟ್ಟಿ ದಾವೆಯನ್ನು ಸಲ್ಲಿಸಿದ್ದೇವೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರದಲ್ಲಿ ಹೇಳಿರುವ ಸಂಗತಿಗಳು ಸುಳ್ಳಿನಿಂದ ಕೂಡಿದ್ದು, ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ದಾವಾಸ್ತಿ ಮನೆಗಳ ಕರವನ್ನು ಯಾರು ಪಾವತಿ ಮಾಡಿರುತ್ತಾರೆಂದು ನನಗೆ ಹೇಳಲು ಆಗುವುದಿಲ್ಲ. ಪ್ರಕರಣಕ್ಕೆ ಅನುಕೂಲವಾಗುವಂತೆ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರುವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದ ರೀತಿ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ.ಸರಿ ಇದೆ

(ಮಹಾದೇವ ಕಾನಟ್ಟಿ)
1ನೇ ಹೆಚ್ಚುವರಿ ಹಿರಿಯ ದಿವಾಣಿ
ನ್ಯಾಯಾಧೀಶರು, ಗೋಕಾಕ

ಸಾಕ್ಷಿಯ ಸಹಿ